# All India Radio: Bangalore
# National Bulletin In Kannada
# 28.02.2026  1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.02.2026  1.10 p.m.**

**<><><><>**

ಮುಖ್ಯಾಂಶಗಳು

1. ಮಹಿಳಾ ಹಾಗೂ ಯುವ ಸಮುದಾಯದ ಸಬಲೀಕರಣಕ್ಕೆ ಕೇಂದ್ರ ಸರ್ಕಾರದಿಂದ ನಿರಂತರ ಶ್ರಮ - ಪ್ರಧಾನಿ ನರೇಂದ್ರ ಮೋದಿ
2. ಡಿಆರ್‌ಡಿಒದಿಂದ ಅತಿ ಕಡಿಮೆ ವ್ಯಾಪ್ತಿಯ ವಾಯು ರಕ್ಷಣಾ ವ್ಯವಸ್ಥೆಯ ಮೂರು ಉಡಾವಣಾ ಪರೀಕ್ಷೆ ಯಶಸ್ವಿ
3. ಇರಾನ್ ಮೇಲೆ ಇಸ್ರೇಲ್ ವಾಯುದಾಳಿ; ತೆಹ್ರಾನ್‌ನಲ್ಲಿ ಭಾರೀ ಸ್ಫೋಟ; ಇಸ್ರೇಲ್‌ನಲ್ಲಿ ತುರ್ತು ಪರಿಸ್ಥಿತಿ ಘೋಷಣೆ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೂಪರ್ ೮ರ ಗುಂಪು-೨ರ ಪಂದ್ಯದಲ್ಲಿಂದು ಪಾಕಿಸ್ತಾನ - ಶ್ರೀಲಂಕಾ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅವರಿಂದು ರಾಜಸ್ಥಾನದ ಅಜ್ಮೀರ್‌ನಲ್ಲಿ ೧೪ ವರ್ಷ ವಯಸ್ಸಿನ ಬಾಲಕಿಯರಿಗಾಗಿ ರಾಷ್ಟ್ರವ್ಯಾಪಿ ಹ್ಯೂಮನ್ ಪ್ಯಾಪಿಲೋಮಾ ವೈರಸ್ ಎಚ್‌ಪಿವಿ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಲಸಿಕಾ ಅಭಿಯಾನ ದೇಶದ ಸಾರ್ವಜನಿಕ ಆರೋಗ್ಯ ಪಯಣದಲ್ಲಿ ನಿರ್ಣಾಯಕ ಹೆಜ್ಜೆಯಾಗಿದ್ದು, ಮಹಿಳಾ ಆರೋಗ್ಯ ರಕ್ಷಣೆಯಲ್ಲಿ ತಡೆಗಟ್ಟುವಿಕೆ ಮತ್ತು ರಕ್ಷಣೆ ಖಚಿತಪಡಿಸಿಕೊಳ್ಳುವ, ಸ್ವಸ್ಥ ನಾರಿಯ ದೃಷ್ಟಿಕೋನವನ್ನು ಮುನ್ನಡೆಸುವ ಸರ್ಕಾರದ ಬದ್ಧತೆಯನ್ನು ಪೂರೈಸುತ್ತದೆ. ಈ ಕಾರ್ಯಕ್ರಮ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಪ್ರತಿ ವರ್ಷ ೧೪ ವರ್ಷ ವಯಸ್ಸಿನ ಸುಮಾರು ೧.೧೫ ಕೋಟಿ ಬಾಲಕಿಯರಿಗೆ ಪ್ರಯೋಜನಕಾರಿಯಾಗಲು ರೂಪಿಸಲಾಗಿದೆ. ಲಸಿಕೆಯನ್ನು ನಿರ್ದಿಷ್ಟ ಸರ್ಕಾರಿ ಆರೋಗ್ಯ ಸೌಲಭ್ಯಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ. ಆಯುಷ್ಮಾನ್ ಆರೋಗ್ಯ ಮಂದಿರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಉಪ-ಜಿಲ್ಲಾ ಮತ್ತು ಜಿಲ್ಲಾ ಆಸ್ಪತ್ರೆಗಳು ಹಾಗೂ ಸರ್ಕಾರಿ

ವೈದ್ಯಕೀಯ ಕಾಲೇಜುಗಳು ಮತ್ತು ಆಸ್ಪತ್ರೆಗಳಲ್ಲಿ ಲಸಿಕೆಯನ್ನು ನೀಡಲಾಗುತ್ತದೆ. ಲಸಿಕೆ ಪಡೆಯುವುದು ಸಂಪೂರ್ಣ ಸ್ವಯಂಪ್ರೇರಿತವಾಗಿದ್ದು, ಅದರ ನೀಡುವಿಕೆಗೂ ಮುನ್ನ ಪೋಷಕರಿಂದ ಒಪ್ಪಿಗೆಯನ್ನು ಪಡೆಯಲಾಗುತ್ತದೆ. ದೇಶಾದ್ಯಂತ ೧೪ ವರ್ಷ ವಯಸ್ಸಿನ ಬಾಲಕಿಯರಿಗೆ ಉಚಿತ ಎಚ್‌ಪಿವಿ ಲಸಿಕೆ ಒದಗಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಭಾರತೀಯ ವೈದ್ಯಕೀಯ ಸಂಸ್ಥೆ - ಐಎಂಎ ಶ್ಲಾಘಿಸಿದೆ. ಅಜ್ಮೇರ್‌ನಲ್ಲಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿದ ಬಳಿಕ ನಡೆದ ಸಾರ್ವಜನಿಕ ಸಭಾ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ೧೬ ಸಾವಿರದ ೬೮೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಘೋಷಣೆ, ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಈ ಯೋಜನೆಗಳು ನಗರಾಭಿವೃದ್ಧಿ, ಕುಡಿಯುವ ನೀರು ಪೂರೈಕೆ, ರಸ್ತೆ, ನೀರಾವರಿ, ಇಂಧನ ಮತ್ತು ಕೈಗಾರಿಕಾ ಮೂಲಸೌಕರ್ಯ ವಲಯಗಳಿಗೆ ಸಂಬಂಧಿಸಿದ್ದಾಗಿವೆ. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸರ್ಕಾರ ಹಾಗೂ ರಾಜಸ್ತಾನದ ರಾಜ್ಯ ಸರ್ಕಾರ ಯುವಜನರ ಸಬಲೀಕರಣಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿದೆ. ಈಗ ರಾಜಸ್ತಾನದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಹಿಡಿಯಲಾಗಿದೆ ಹಾಗೂ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಒಂದು ಕುಟುಂಬದಲ್ಲಿ ತಾಯಿ ಆರೋಗ್ಯವಂತಳಾಗಿದ್ದರೆ, ಆ ಕುಟುಂಬ ಎದುರಿಸುವಂತಹ ಎಲ್ಲಾ ಸಮಸ್ಯೆಗಳನ್ನು ನಿಭಾಯಿಸುವ ಸಾಮರ್ಥ್ಯವನ್ನು ಹೊಂದಿರುತ್ತದೆ. ಇದೇ ಭಾವದೊಂದಿಗೆ ಕೇಂದ್ರ ಸರ್ಕಾರ ಮಹಿಳಾ ಸಬಲೀಕರಣದ ಧ್ಯೇಯದ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಹೇಳಿದ್ದಾರೆ.

**ಧ್ವನಿ: ನರೇಂದ್ರ ಮೋದಿ**

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಸಾನಂದ್‌ನಲ್ಲಿ ಮೈಕ್ರಾನ್ ಟೆಕ್ನಾಲಜಿಯ ಅತ್ಯಾಧುನಿಕ ಸೆಮಿಕಂಡಕ್ಟರ್ ಜೋಡಣೆ ಪರೀಕ್ಷೆ ಮತ್ತು ಪ್ಯಾಕೇಜಿಂಗ್ ಘಟಕವನ್ನು ಉದ್ಘಾಟಿಸಲಿದ್ದಾರೆ. ಆ ಮೂಲಕ ಭಾರತದಲ್ಲೇ ತಯಾರಿಸಲಾದ ಮೊದಲ ಸೆಮಿಕಂಡಕ್ಟರ್ ಮೆಮೊರಿ ಮಾಡ್ಯೂಲ್‌ಗಳ ವಾಣಿಜ್ಯ ಉತ್ಪಾದನೆ ಮತ್ತು ಅಧಿಕೃತ ಸಾಗಣೆಗೆ ಚಾಲನೆ ದೊರೆಯಲಿದೆ. ಈ ಸಂದರ್ಭದಲ್ಲಿ ಕೇಂದ್ರ

ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಉಪಸ್ಥಿತರಿರಲಿದ್ದಾರೆ. ಒಟ್ಟು ೨೨ ಸಾವಿರದ ೫೦೦ ಕೋಟಿ ರೂಪಾಯಿಗೂ ಅಧಿಕ ಹೂಡಿಕೆಯೊಂದಿಗೆ ನಿರ್ಮಾಣವಾಗಿರುವ ಈ ಸೌಲಭ್ಯ ಭಾರತ ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಅನುಮೋದನೆ ಪಡೆದ ಮೊದಲ ಪ್ರಸ್ತಾವನೆಯಾಗಿದೆ.

<><><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ಕಾಲ ಕೇರಳ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ಮೊದಲನೇ ದಿನವಾದ ಇಂದು ಉಪರಾಷ್ಟ್ರಪತಿ, ಚಂಗನಸೆರಿಯ ಸೇಂಟ್ ಬೆರ್ಚ್‌ಮಾನ್ಸ್ ಕಾಲೇಜಿನ ಶತಮಾನೋತ್ಸವ ಸಂಭ್ರಮಾಚರಣೆಯ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಳೆ ಅವರು, ತ್ರಿಶೂರ್‌ನ ದೇವಮಾತಾ ಸಿಎಂಐ ಪಬ್ಲಿಕ್ ಶಾಲೆಯಲ್ಲಿ ಚೇತನ ಗಾನಾಶ್ರಮಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದರ ಜೊತೆಗೆ ಉಪರಾಷ್ಟ್ರಪತಿ, ತಿರುವನಂತಪುರಂನಲ್ಲಿ ಸೇಂಟ್ ಸ್ಟೀಫನ್ಸ್ ಪ್ರೌಢಶಾಲೆಯ ಶತಮಾನೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><><>

ದೇಶಾದ್ಯಂತ ಇಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತಿದೆ. ಖ್ಯಾತ ಭೌತಶಾಸ್ತ್ರಜ್ಞ ಸರ್. ಸಿ.ವಿ. ರಾಮನ್ ಅವರು ರಾಮನ್ ಎಫೆಕ್ಟ್‌ಅನ್ನು ಕಂಡುಹಿಡಿದ ನೆನಪಿಗಾಗಿ ಪ್ರತಿವರ್ಷ ಈ ದಿನವನ್ನು ಆಚರಿಸಲಾಗುತ್ತಿದೆ. ಈ ಆವಿಷ್ಕಾರಕ್ಕಾಗಿಯೇ ಸಿ.ವಿ. ರಾಮನ್ ಅವರಿಗೆ ೧೯೩೦ರಲ್ಲಿ ನೋಬೆಲ್ ಪ್ರಶಸ್ತಿ ಲಭಿಸಿತ್ತು. ರಾಷ್ಟ್ರೀಯ ವಿಜ್ಞಾನ ದಿನದ ಹಿನ್ನೆಲೆಯಲ್ಲಿ ಸಂದೇಶ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ, ಯುವಜನರ ಸಬಲೀಕರಣ, ಸಂಶೋಧನಾ ಪರಿಸರ ವ್ಯವಸ್ಥೆಯ ಬಲವರ್ಧನೆ ಹಾಗೂ ರಾಷ್ಟ್ರದ ಅಭಿವೃದ್ಧಿ ಮತ್ತು ಜಾಗತಿಕ ಕಲ್ಯಾಣಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಬಳಸಿಕೊಳ್ಳುವ ಸಂಕಲ್ಪವನ್ನು ಪುನರುಚ್ಚರಿಸಿದ್ದಾರೆ. ಈ ದಿನ ದೇಶದ ಜನತೆ ಸಂಶೋಧನೆ, ನಾವೀನ್ಯತೆ ಮತ್ತು ವೈಜ್ಞಾನಿಕ ಕುತೂಹಲದ ಮನೋಭಾವವನ್ನು ಸಂಭ್ರಮಿಸುತ್ತಿದೆ. ಇದು ಜಾಗತಿಕ ಭೂಪಟದಲ್ಲಿ ಭಾರತದ ಸ್ಥಾನಮಾನವನ್ನು ಎತ್ತರಕ್ಕೆ ಕೊಂಡೊಯ್ದ ರಾಮನ್ ಎಫೆಕ್ಟ್ ಆವಿಷ್ಕಾರದ ದಿನವಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ. ತಮ್ಮ ಸಂದೇಶದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ದೇಶದ ಸಮಸ್ತ ವಿಜ್ಞಾನಿಗಳು ಹಾಗೂ

ಸಂಶೋಧಕರಿಗೆ ರಾಷ್ಟ್ರೀಯ ವಿಜ್ಞಾನ ದಿನದ ಶುಭಾಶಯ ಕೋರಿದ್ದಾರೆ. ಅವರ ನಿರಂತರ ಅನ್ವೇಷಣೆ ದೇಶದ ಮುಂದಿನ ಹಾದಿಗೆ ದಾರಿದೀಪವಾಗುತ್ತದೆ ಎಂದು ಹೇಳಿದ್ದಾರೆ.

<><><><>

ಒಡಿಶಾ ಕರಾವಳಿಯ ಚಂಡಿಪುರದಲ್ಲಿರುವ ಸಮಗ್ರ ಪರೀಕ್ಷಾ ಕೇಂದ್ರದಿಂದ ಅತಿ ಕಡಿಮೆ ವ್ಯಾಪ್ತಿಯ ವಾಯು ರಕ್ಷಣಾ ವ್ಯವಸ್ಥೆಯ ಮೂರು ಉಡಾವಣಾ ಪರೀಕೆಗಳನ್ನು ರಕ್ಷಣಾ ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆ - ಡಿಆರ್‌ಡಿಒ ಯಶಸ್ವಿಯಾಗಿ ನಡೆಸಿದೆ. ವಿವಿಧ ವೇಗ, ಶ್ರೇಣಿ ಮತ್ತು ಎತ್ತರದಲ್ಲಿ ಸಂಚರಿಸುವ ಶತ್ರು ಪಡೆಗಳ ಕ್ಷಿಪಣಿಗಳನ್ನು ಹೊಡೆದುರುಳಿಸ ಬಲ್ಲ ಈ ಕ್ಷಿಪಣಿ ವ್ಯವಸ್ಥೆಯ ಸಾಮರ್ಥ್ಯವನ್ನು ಮರು ದೃಢೀಕರಿಸಲು ಈ ಪರೀಕ್ಷೆಗಳನ್ನು ನಡೆಸಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಎಲ್ಲಾ ಪರೀಕ್ಷೆಗಳ ಸಮಯದಲ್ಲಿ ಶತ್ರು ವಿಮಾನಗಳಂತೆಯೇ ವಿನ್ಯಾಸಗೊಳಿಸಲಾಗಿದ್ದ ಅತಿ ವೇಗದ ವೈಮಾನಿಕ ಗುರಿಗಳನ್ನು ಈ ವ್ಯವಸ್ಥೆ ಯಶಸ್ವಿಯಾಗಿ ತಡೆದು, ನಾಶಪಡಿಸಿದೆ. ಈ ಪರೀಕ್ಷಾರ್ಥ ಹಾರಾಟದ ಯಶಸ್ಸಿಗೆ ಡಿಆರ್‌ಡಿಒ, ಸಶಸ್ತ್ರ ಪಡೆಗಳು ಮತ್ತು ಉದ್ಯಮ ತಜ್ಞರನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಭಿನಂದಿಸಿದ್ದಾರೆ. ಈ ಕ್ಷಿಪಣಿ ವ್ಯವಸ್ಥೆಯನ್ನು ಶೀಘ್ರದಲ್ಲೇ ಸಶಸ್ತ್ರ ಪಡೆಗಳಿಗೆ ಸೇರ್ಪಡೆಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಗಗನಕ್ಕೇರಿದ್ದು, ಇರಾನ್ ಮೇಲೆ ಇಂದು ಇಸ್ರೇಲ್ ವೈಮಾನಿಕ ದಾಳಿ ನಡೆಸಿದೆ.  ದಾಳಿ ನಡೆಸಿರುವುದನ್ನು ಖಚಿತಪಡಿಸಿರುವ ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಸ್, ಇಸ್ರೇಲ್‌ನಾದ್ಯಂತ ತಕ್ಷಣದಿಂದ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ. ಇಂದಿನ ದಾಳಿ ಇರಾನ್ ಸರ್ವೋಚ್ಛ ನಾಯಕ ಅಯಾತುಲ್ಲಾ ಅಲಿ ಖಮೇನಿ ಅವರ ಕಚೇರಿಯ ಸಮೀಪವಿರುವ ಪ್ರದೇಶದಲ್ಲಿ ನಡೆದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿರುವುದಾಗಿ ವರದಿಯಾಗಿದೆ. ಇರಾನ್ ರಾಜಧಾನಿ ಟೆಹ್ರಾನ್ ಮಧ್ಯ ಭಾಗದಲ್ಲಿ ಮೂರು ಭಾರೀ ಸ್ಫೋಟಗಳು ಕೇಳಿಬಂದಿದ್ದು, ನಗರದ ಆಕಾಶದಲ್ಲಿ ದಟ್ಟ ಹೊಗೆ ಆವರಿಸಿದೆ. ದಾಳಿಯಲ್ಲಿ ಇರಾನ್‌ನ ಪ್ರಮುಖ ಸೇನಾ ನೆಲೆಗಳು ಮತ್ತು ಆಯಕಟ್ಟಿನ ಸ್ಥಳಗಳನ್ನು ಗುರಿಯಾಗಿಸಲಾಗಿದೆ ಎಂದು ವರದಿಯಾಗಿದೆ. ಇರಾನ್ ಮೇಲೆ ಇಸ್ರೇಲ್ ವಾಯುದಾಳಿ; ತೆಹ್ರಾನ್‌ನಲ್ಲಿ ಭಾರೀ ಸ್ಫೋಟ; ಇಸ್ರೇಲ್‌ನಲ್ಲಿ ತುರ್ತು ಪರಿಸ್ಥಿತಿ ಘೋಷಣೆ

<><><><>

ಭಾರತ ಪ್ರವಾಸದಲ್ಲಿರುವ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಮುಂಬೈನಲ್ಲಿಂದು ಉದ್ಯಮ ನಾಯಕರನ್ನು ಭೇಟಿ ಮಾಡಲಿದ್ದಾರೆ. ಈ ವೇಳೆ ಅವರು, ಭಾರತ ಹಾಗೂ ಕೆನಡಾದ ಕಂಪನಿಗಳ ಕಾರ್ಯ ನಿರ್ವಾಹಕ ಅಧಿಕಾರಿಗಳು, ಉದ್ಯಮ ನಾಯಕರು, ಆರ್ಥಿಕ ತಜ್ಞರು, ನಾವೀನ್ಯಕಾರರು, ಶಿಕ್ಷಣ ತಜ್ಞರು ಮತ್ತು ಭಾರತದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೆನಡಾ ಪಿಂಚಣಿ ನಿಧಿಗಳ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ತಮ್ಮ ಮೊದಲ ಅಧಿಕೃತ ಭಾರತ ಭೇಟಿಗಾಗಿ ಪ್ರಧಾನಿ ಕಾರ್ನಿ, ನಿನ್ನೆ ಮುಂಬೈಗೆ ಆಗಮಿಸಿದರು. ಅವರನ್ನು ಮಹಾರಾಷ್ಟ್ರದ ರಾಜ್ಯ ಸಚಿವ ಜೈಕುಮಾರ್ ರಾವಲ್ ಬರಮಾಡಿಕೊಂಡರು. ಉಭಯ ರಾಷ್ಟ್ರಗಳ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವಲ್ಲಿ ಈ ಭೇಟಿ ಪ್ರಮುಖ ಹೆಜ್ಜೆಯಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><>

ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಕುರಿತು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಕಳವಳ ವ್ಯಕ್ತಪಡಿಸಿದ್ದು, ಹಿಂಸಾಚಾರವನ್ನು ತಕ್ಷಣವೇ ನಿಲ್ಲಿಸುವಂತೆ ಉಭಯ ರಾಷ್ಟ್ರಗಳಿಗೆ ಕರೆ ನೀಡಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ನಿನ್ನೆ ಈ ಕುರಿತು ಮಾತನಾಡಿದ ಪ್ರಧಾನ ಕಾರ್ಯದರ್ಶಿಗಳ ವಕ್ತಾರ ಸ್ಟೀಫನ್ ಡುಜಾರಿಕ್, ಸಂಘರ್ಷದಿಂದ ನಾಗರಿಕ ಜನ ಜೀವನದ ಮೇಲಾಗುತ್ತಿರುವ ಪರಿಣಾಮಗಳ ಬಗ್ಗೆ ವಿಶ್ವಸಂಸ್ಥೆ ಮುಖ್ಯಸ್ಥರು ಆತಂಕ ವ್ಯಕ್ತಪಡಿಸಿದ್ದು, ಉಭಯ ರಾಷ್ಟ್ರಗಳು ತಮ್ಮ ಭಿನ್ನಾಭಿಪ್ರಾಯಗಳನ್ನು ರಾಜತಾಂತ್ರಿಕ ಮಾರ್ಗಗಳ ಮೂಲಕವೇ ಬಗೆಹರಿಸಿಕೊಳ್ಳಬೇಕು ಎಂದು ಪುನರುಚ್ಚರಿಸಿದ್ದಾರೆ. ನಾಗರಿಕರ ಮತ್ತು ಮೂಲಸೌಕರ್ಯಗಳ ರಕ್ಷಣೆಯನ್ನು ಖಚಿತಪಡಿಸಲು ಅಂತಾರಾಷ್ಟ್ರೀಯ ಮಾನವೀಯ ಕಾನೂನಿನಡಿ ತಮ್ಮ ಜವಾಬ್ದಾರಿಗಳನ್ನು ಪಾಲಿಸುವಂತೆ ಉಭಯ ರಾಷ್ಟ್ರಗಳಿಗೆ ವಿಶ್ವಸಂಸ್ಥೆ ಆಗ್ರಹಿಸಿದೆ.

<><><>

ಪಲ್ಲೆಕೆಲೆ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು-೨ರ ಪಂದ್ಯದಲ್ಲಿ ಶ್ರೀಲಂಕಾ ಹಾಗೂ ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ. ಕೊಲಂಬೋದ ಆರ್. ಪ್ರೇಮದಾಸ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಗುಂಪು-೨ರ ಪಂದ್ಯದಲ್ಲಿ ನ್ಯೂಜಿಲ್ಯಾಂಡ್

ತಂಡವನ್ನು ಇಂಗ್ಲೆಂಡ್ ತಂಡ ೪ ವಿಕೆಟ್‌ಗಳಿಂದ ಪರಾಭವಗೊಳಿಸಿ, ಸೆಮಿಫೈನಲ್‌ನಲ್ಲಿ ತನ್ನ ಸ್ಥಾನ ಭದ್ರಪಡಿಸಿಕೊಂಡಿದೆ.

<><><><>

ಕರ್ನಾಟಕದ ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಫೈನಲ್ ಪಂದ್ಯದ ೫ನೇ ದಿನದಾಟದಲ್ಲಿಂದು ಕರ್ನಾಟಕ ವಿರುದ್ಧ ಜಮ್ಮು-ಕಾಶ್ಮೀರ ತನ್ನ ಎರಡನೇ ಇನ್ನಿಂಗ್ಸ್ ಅನ್ನು ಮುಂದುವರಿಸಿದ್ದು, ಇತ್ತೀಚಿನ ವರದಿ ಬಂದಾಗ ೪ವಿಕೆಟ್ ನಷ್ಟಕ್ಕೆ ೧೮೭ರನ್ ಗಳಿಸಿ ಆಡುತ್ತಿದೆ. ಪ್ರಸ್ತುತ ಜಮ್ಮು-ಕಾಶ್ಮೀರ ೫೭೮ ರನ್‌ಗಳ ಮುನ್ನಡೆಯಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>